ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 :** **ಏಪ್ರಿಲ್ 15, 2020**

## ಪತ್ರಿಕಾ ಆಮಂತ್ರಣ

## ಪತ್ರಿಕಾ ಗೋಷ್ಠಿ

ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯು **COVID- 19** ವೈರಸ್ ಕುರಿತು ರಾಜ್ಯದ ಎಲ್ಲಾ ವಕ್ಫ್ ಸಂಸ್ಥೆಗಳಲ್ಲಿ ಜಾಗೃತಿ ಮೂಡಿಸಲು ಪತ್ರಿಕಾ ಗೋಷ್ಠಿಯನ್ನು ಏರ್ಪಡಿಸಿದೆ.

ಡಾ: ಮೊಹಮ್ಮದ್ ಯೂಸುಫ್, ಅಧ್ಯಕ್ಷರು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ.

ಇಬ್ರಾಹಿಂ ಅಡೂರ್, ಭಾ.ಆ.ಸೇ. ಕಾರ್ಯದರ್ಶಿಗಳು, ಅಲ್ಪ ಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ.

ದಿನಾಂಕ: 16–04–2020, ಗುರುವಾರ, ಸಮಯ: ಮಧ್ಯಾಹ್ನ 12:30 ಘಂಟೆಗೆ.
ಸ್ಥಳ: ಕೇಂದ್ರ ಕಛೇರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ನಂ.06, ಕನ್ನಿಂಗ್ಯಾಮ್ ರೋಡ್, ಬೆಂಗಳೂರು–560052.

**ವಿಶೇಷ ಲೇಖನ : ಲಾಕ್ ಡೌನ್‌ನ ಒಂದು ಸುತ್ತ**

**ಪತ್ರಿಕಾ ಪ್ರಕಟಣೆ**

## ಜಾರ್ಖಂಡ್ ಮೂಲದ ನೆಲೆ ಇಲ್ಲದ ಗರ್ಭಿಣಿ ಮಹಿಳೆಗೆ "ರಾಜ್ಯಾ"ಶ್ರಯ !

ಬೆಂಗಳೂರು, ಏಪ್ರಿಲ್ 15 (ಕರ್ನಾಟಕ ವಾರ್ತೆ) :

ಉದ್ಯೋಗ ಅರಸಿ ಕರ್ನಾಟಕಕ್ಕೆ ವಲಸೆ ಬಂದು ಅಚಾನಕ್ ಘೋಷಣೆಯಾದ ಲಾಕ್ ಡೌನ್‌ನ ಪರಿಣಾಮ ಅಕ್ಷರಷಃ ರಸ್ತೆಗೆ ಬಿದ್ದಿದ್ದ ಜಾರ್ಖಂಡ್ ಮೂಲದ ಕಟ್ಟಡ ಕಾರ್ಮಿಕ ದಂಪತಿಗೆ, ಅದರಲ್ಲೂ ನೆಲೆ ಇಲ್ಲದೆ ರಸ್ತೆಯಲ್ಲೇ ವಾಸವಿದ್ದ ತುಂಬು ಗರ್ಭಿಣಿ ಮಹಿಳೆಗೆ, ಕರ್ನಾಟಕ ಸರ್ಕಾರ ರಾಜ್ಯಾಶ್ರಯ ಕಲ್ಪಿಸಿದ ಹೃದಯ ಸ್ಪರ್ಶಿ ಘಟನೆ ಇಲ್ಲಿ ಇಂದು ನಡೆದಿದೆ.

ವಾಸ್ತವ ಚಿತ್ರಣ !

ದೂರದ ಜಾರ್ಖಂಡ್ ರಾಜ್ಯದ ಮಿಯಾಬಾದ್ ನಗರದ ಕುಸುಮಾ ದೇವಿ ಇದೀಗ ಏಳು ತಿಂಗಳ ತುಂಬು ಗರ್ಭಿಣಿ. ಉದ್ಯೋಗ ದೊರಕಿಸಿಕೊಡುವುದಾಗಿ ತಮ್ಮ ಸೋದರ ಸಂಬಂಧಿ ನೀಡಿದ ಭರವಸೆಯ ಮೇರೆಗೆ ಭವಿಷ್ಯವನ್ನು ರೂಪಿಸಿಕೊಳ್ಳಲು

ತಮ್ಮ ಪತಿಯ ಜೊತೆ ಬೆಂಗಳೂರಿಗೆ ಆಗಮಿಸಿದ್ದಾರೆ. ಕಟ್ಟಡ ಕಾರ್ಮಿಕರಾಗಿ ದುಡಿದು ತಮ್ಮ ಅನ್ನವನ್ನು ಸಂಪಾದಿಸಿಕೊಳ್ಳುತ್ತಿದ್ದರು. ತಾವು ಕೆಲಸ ಮಾಡುವ ನಿರ್ಮಾಣ ಹಂತದ ಕಟ್ಟಡಗಳಲ್ಲಿಯೇ ಉಳಿದುಕೊಂಡು ಜೀವನ ಸಾಗಿಸುತ್ತಿದ್ದರು.

ಇದೇ ವೇಳೆ ಮಾರ್ಚ್ 22 ರ ಜನತಾ ಕರ್ಫ್ಯೂ ಹಾಗೂ ಮಾರ್ಚ್ 24 ರಂದು ಘೋಷಣೆಯಾದ ಮೊದಲ ಹಂತದ ಲಾಕ್ ಡೌನ್ ಈ ದಂಪತಿಯ ಬಾಳಲ್ಲಿ ಬರ ಸಿಡಿಲು ಬಂದೆರಗಿದಂತಾಗಿದೆ. ಒಂದೆಡೆ ಉದ್ಯೋಗವಿಲ್ಲ. ಮತ್ತೊಂದೆಡೆ ಆದಾಯವಿಲ್ಲ. ಮಗದೊಂದೆಡೆ ಸೂರು ಇಲ್ಲ. ಮೊದಲ ಕೆಲವು ದಿನ ತಮ್ಮ ಸಂಬಂಧಿಯ ಮನೆಯಲ್ಲಿ ಆಶ್ರಯ ಪಡೆದ ಈ ದಂಪತಿಗೆ " ನಮಗೂ ಕಷ್ಟವಿದೆ. ತಾವು ಪರ್ಯಾಯ ವ್ಯವಸ್ಥೆ ಮಾಡಿಕೊಳ್ಳಿ " ಎಂದು ಹೇಳಿದಾಗ ದಿಕ್ಕು-ತೋಚದಂತಾಗಿದೆ. ಇವರ ಕಷ್ಟವನ್ನು ಕಂಡ ನೆರೆ ಮನೆಯ ಸಹೃದಯಿಯೊಬ್ಬರು ಲಾಕ್ ಡೌನ್ ಮುಕ್ತಾಯಗೊಳ್ಳುವವರೆಗೂ ತಮ್ಮ ಮನೆಯಲ್ಲೇ ಇರಲು ಅವಕಾಶ ಕಲ್ಪಿಸಿದ್ದಾರೆ. ಆದರೆ, ಲಾಕ್ ಡೌನ್ ಏಪ್ರಿಲ್ 15 ರಿಂದ ಮೇ 3 ರ ವರೆಗೆ ಮತ್ತೆ ಮುಂದುವರೆಯುತ್ತದೆ ಎಂಬ ಸುದ್ದಿ ಹೊರಹೊಮ್ಮುತ್ತಿದ್ದಂತೆಯೇ, ಅವರೂ ಕೂಡಾ " ತಾವು ದಯಮಾಡಿ ಜಾಗ ಖಾಲಿ ಮಾಡಿ " ಎಂದು ಹೇಳಿದ್ದಾರೆ.

ಮನೆ ಇಲ್ಲದೆ, ತಿನ್ನಲು ಅನ್ನವಿಲ್ಲದೆ ರಸ್ತೆಯಲ್ಲಿಯೇ ಮಲಗಿದ್ದ ಈ ದಂಪತಿಯನ್ನು ಕಂಡ ಹಾದಿಹೋಕರೋರ್ವರು ಕಾರ್ಮಿಕ ಇಲಾಖೆಯ ದಾಸೋಹ ಸಹಾಯವಾಣಿ ( ಹಂಗರ್ ಹೆಲ್ಪ ಲೈನ್ ) ಶುಲ್ಕ-ರಹಿತ ದೂರವಾಣಿ ಸಂಖ್ಯೆ : 155214 ಮೂಲಕ ಸಂಪರ್ಕಿಸಿ ಕರೆ ಮಾಡಿ ಲಾಕ್ ಡೌನ್ ಅವಧಿಯಲ್ಲಿ ಸೂರು ಇಲ್ಲದೆ, ಊಟವಿಲ್ಲದೆ ಈ ಗಂಡ-ಹೆಂಡತಿ ಎದುರಿಸುತ್ತಿರುವ ಸಮಸ್ಯೆಯನ್ನು ತಿಳಿಸಿದ್ದಾರೆ. ಅಲ್ಲದೆ, ಇದೇ ವಿಷಯವನ್ನು ಟ್ವೀಟ್ ಮೂಲಕವೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗಮನಕ್ಕೆ ತಂದಿದ್ದಾರೆ.

ಈ ವಿಷಯದತ್ತ ವಿಶೇಷ ಗಮನಹರಿಸಿದ ಕಾರ್ಮಿಕ ಇಲಾಖೆಯ ದಾಸೋಹ ಸಹಾಯವಾಣಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಟ್ವೀಟ್ ತಂಡ ಸ್ವಯಂಸೇವಕರ ನೆರವು ಪಡೆದು ಅವರನ್ನು ಸಂಪರ್ಕಿಸಲು ಯತ್ನಿಸಿದೆ. ತಮ್ಮ ಮೊಬೈಲ್ ದೂರವಾಣಿಗೆ ಮೇಲಿಂದ ಮೇಲೆ ಕರೆಗಳು ಸ್ವೀಕೃತವಾದ ಹಿನ್ನೆಲೆಯಲ್ಲಿ ಭಯ-ಭೀತರಾದ ತಮ್ಮ ಮೋಬೈಲನ್ನು ಸ್ವಿಚ್ ಆಫ್ ಮಾಡಿ ಅತ್ತಿಬೆಲೆ ವ್ಯಾಪ್ತಿಯ ಹಳೆಯ ಮನೆಯೊಂದರಲ್ಲಿ ಅಡಗಿ ಕುಳಿತಿದ್ದಾರೆ. ಆದರೆ, ಬೆಂಬಿಡದ ಸ್ವಯಂ ಸೇವಕರು ಸ್ಥಳೀಯ ಪೊಲೀಸರ ನೆರವಿನೊಂದಿಗೆ ರಾತ್ರಿ ಇಡೀ  ದಂಪತಿಗಾಗಿ ಶೋಧ ನಡೆಸಿದ್ದಾರೆ. ಮೊಬೈಲ್ ಸ್ವಿಚ್ ಆಫ್ ಆಗಿದ್ದ ಹಿನ್ನೆಲೆಯಲ್ಲಿ ಟವರ್ ಮೂಲಕವೂ ಕೂಡಾ ಅವರು ಇರುವ ಸ್ಥಳವನ್ನು ಹುಡುಕುವ ಯತ್ನ ಯಶ ಕಂಡಿರಲಿಲ್ಲ. ಇಂದು ಬೆಳಗ್ಗೆ ಮತ್ತೆ ಏಳು ಗಂಟೆಗೆ ಕುಸುಮಾ ಅವರ ಪತಿ ತಮ್ಮ ಮೊಬೈಲ್ ಸ್ವಿಚ್ ಆನ್ ಮಾಡಿದ್ದಾರೆ. ಈ ವಿಷಯವನ್ನು ಅವರಿತ ಸ್ಥಳೀಯ ಪೊಲೀಸರು ದಂಪತಿ ಇರುವ ಸ್ಥಳವನ್ನು ಮೊಬೈಲ್ ಟವರ್ ಮೂಲಕ ಪತ್ತೆ ಹಚ್ಚಿದ್ದಾರೆ.

ನಂತರ, ಸ್ವಯಂ ಸೇವಕರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕೇಂದ್ರ ಕಚೇರಿ ವಾರ್ತಾ ಸೌಧಕ್ಕೆ ಕರೆತಂದಿದ್ದಾರೆ. ಮೊದಲು ಊಟ ಮಾಡಿಸಿ, ಅವರ ಕಷ್ಟ-ಸಂಕಷ್ಟವನ್ನು ಆಲಿಸಿದ ಎಲ್ಲರ ಕಣ್ಣಾಲೆಗಳು ತುಂಬಿ ಹೋಗಿದ್ದವು. ತದ ನಂತರ, ಕಾರ್ಮಿಕ ರಾಜ್ಯ ವಿಮಾ ಇಲಾಖೆಯ( ಇಎಸ್ಐ ) ಆಸ್ಪತ್ರೆಯ ವೈದ್ಯರು ಗರ್ಭಿಣಿ ಮಹಿಳೆಯ

ಆರೋಗ್ಯ ತಪಾಸಣೆ ಮಾಡಿದ್ದಾರೆ. ಲಾಕ್ ಡೌನ್ ಮುಕ್ತಾಯಗೊಳ್ಳುವವರೆಗೂ ಈ ಅವಧಿಗೆ ರಾಜ್ಯ ಸರ್ಕಾರದ ಅತಿಥಿ ಗೃಹದಲ್ಲಿ ಭೋಜನ ಹಾಗೂ ವಾಸ್ತವ್ಯ ವ್ಯವಸ್ಥೆ ಮಾಡಲಾಗಿದೆ. ಎಲ್ಲಕ್ಕೂ ಮಿಗಿಲಾಗಿ ಗರ್ಭಿಣಿಗೆ ಅವಶ್ಯಕತೆ ಇರುವ ಎಲ್ಲಾ ಔಷಧೋಪಚಾರ ವ್ಯವಸ್ಥೆಯನ್ನೂ ಕಲ್ಪಿಸಲಾಗಿದೆ. ಒಟ್ಟಾರೆ ಲಾಕ್ ಡೌನ್ ನಿಂದ ಸಂದಿಗ್ಧಕ್ಕೆ ಒಳಗಾಗಿದ್ದ ದಂಪತಿಗೆ ಇದೀಗ ರಾಜ್ಯಾಶ್ರಯ ದೊರೆತು, ದಂಪತಿಯ ಬಾಳಲ್ಲಿ ಆಶಾಕಿರಣ ಮೂಡಿಸಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

************

ಡಿ ಪಿ ಎಂ : ಜೆ ಜಿ

## ಪತ್ರಿಕಾ ಪ್ರಕಟಣೆ

## ಪಡಿತರ ವಿತರಣೆಯಲ್ಲಿ ಲೋಪದೋಷವಾದರೆ ಈ ವಿಳಾಸಕ್ಕೆ ದೂರು ನೀಡಿ

ಬೆಂಗಳೂರು, ಏಪ್ರಿಲ್ 15 (ಕರ್ನಾಟಕ ವಾರ್ತೆ): ರಾಜ್ಯ ಸರ್ಕಾರವು ದಿನಾಂಕ:10-06-2020 ರಂದು ಕರ್ನಾಟಕ ರಾಜ್ಯ ಆಹಾರ ಆಯೋಗವನ್ನು ರಚಿಸಿದ್ದು. ರಾಜ್ಯ ಆಹಾರ ಆಯೋಗವು ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013ರ ಪ್ರಕಾರ ಅನುಷ್ಟಾನಗೊಂಡಿರುತ್ತದೆ. ಪಡಿತರ ವಿತರಣೆಯಲ್ಲಿನ ಲೋಪದೋಷಗಳು ಕಂಡು ಬಂದಲ್ಲಿ ಸಾರ್ವಜನಿಕರು ದೂರು ನೀಡುವಂತೆ ಪ್ರಕಟಣೆ ತಿಳಿಸಿದೆ.

ಕರ್ನಾಟಕ ರಾಜ್ಯ ಆಹಾರ ಆಯೋಗ, 1 ನೇ ಮಹಡಿ, ಎ.ಎಸ್.ವಿ.ಎನ್.ವಿ ಭವನ, ಮೈಸೂರ್ ಬ್ಯಾಂಕ್ ವೃತ್ತ, ಕೆ.ಜಿ.ರಸ್ತೆ, ಬೆಂಗಳೂರು -560009 ವಿಳಾಸಕ್ಕೆ ದೂರು ನೀಡಬಹುದು. ದೂರವಾಣಿ ಸಂಖ್ಯೆ: 080-22269944, 22268844 ವಿವರಕ್ಕಾಗಿ ಕರೆ ಮಾಡಬಹುದಾಗಿದೆ ಅಥವಾ ವೆಬ್‌ಸೈಟ್ **kastfoodcommi@gmail.com** ಹೆಚ್ಚಿನ ಮಾಹಿತಿಗಾಗಿ ಬೇಟಿ ನೀಡಬಹುದಾಗಿದೆ.

## ಕಾರ್ಮಿಕ ಇಲಾಖೆಯಿಂದ ನೋಂದಾಯಿತ ಕಾರ್ಮಿಕರಿಗೆ ಧನ ಸಹಾಯ

ಬೆಂಗಳೂರು, ಏಪ್ರಿಲ್ 15 (ಕರ್ನಾಟಕ ವಾರ್ತೆ): ಕೊರೋನಾ ವೈರಸ್ ಎಲ್ಲೆಡೆ ವ್ಯಾಪಕವಾಗಿ ಹರಡುತ್ತಿರುವ ಹಿನ್ನಲೆಯಲ್ಲಿ ಸರ್ಕಾರವು ರಾಜ್ಯಾದ್ಯಾಂತ ಲಾಕ್ ಡೌನ್ ಘೋಷಿಸಿರುವುದರಿಂದ, ಸರ್ಕಾರದ ಆದೇಶದನ್ವಯ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ಪ್ರತಿಯೊಬ್ಬ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ರೂ.2000/- ಗಳನ್ನು ನೇರವಾಗಿ ಡಿ.ಬಿ.ಟಿ ಮೂಲಕ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಬೇಕಾಗಿರುತ್ತದೆ.

ಬ್ಯಾಂಕ್ ಖಾತೆಗಳಿಗೆ ಹಣ ಜಮೆಯಾಗದಿರುವ ಎಲ್ಲಾ ನೋಂದಾಯಿತ ಕಟ್ಟಡ ಕಾರ್ಮಿಕರು ತಮ್ಮ ನೋಂದಣಿ ಸಂಖ್ಯೆಯೊಂದಿಗೆ ತಮ್ಮ ಖಾತೆ ಇರುವ ಬ್ಯಾಂಕಿನ ಹೆಸರು, ಚಾಲ್ತಿಯಲ್ಲಿರುವ ಖಾತೆ ಸಂಖ್ಯೆ, ಐಎಫ್ಎಸ್ ಸಿ ಕೋಡ್ ಮತ್ತು ಆಧಾರ್ ಸಂಖ್ಯೆಯನ್ನು ತುರ್ತಾಗಿ.

1. ತಮ್ಮನ್ನು ನೋಂದಾಣಿಯಿಸಿರುವ ಕಾರ್ಮಿಕ ನಿರೀಕ್ಷಕರು /ಹಿರಿಯ ಕಾರ್ಮಿಕ ನಿರೀಕ್ಷಕರು/ ಕಾರ್ಮಿಕ ಅಧಿಕಾರಿಯವರ ಕಛೇರಿಗೆ ಅಥವಾ

2. ಕಾರ್ಮಿಕ ಬಂಧುಗಳ / ಮಾಲೀಕರ /ನೋಂದಾಯಿತ ಕಾರ್ಮಿಕ ಸಂಘಗಳ ಮುಖಾಂತರ ಮಂಡಳಿಯ ಇ-ಮೇಲ್ **ID:kbocwwbcovid@gmail.com** ಅಥವಾ

3. ನೇರವಾಗಿ ಮಂಡಳಿಯ **whatsapp No.8277370000** ಗೆ ಸಲ್ಲಿಸಲು ಅಥವಾ

4. ಬ್ಯಾಂಕ್ ಖಾತೆಯ ವಿವರಗಳನ್ನು ಮಂಡಳಿಯ ವೆಬ್ ಸೈಟ್ **www.karbwwb.com/data.shtml** ಅಲ್ಲಿ ದಿನಾಂಕ: 16-04-2020 ರಿಂದ ಬೆಳಿಗ್ಗೆ 10 ಗಂಟೆಯಿಂದ ದಾಖಲಿಸಬಹುದೆಂದು ಸೂಚಿಸಿದೆ ಎಂದು ಬೆಂಗಳೂರು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಕಾರ್ಯದಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರಿನ ಬಿಲ್ ಪಾವತಿಗೆ ಕ್ರಮ

ಬೆಂಗಳೂರು, ಏಪ್ರಿಲ್ 15 (ಕರ್ನಾಟಕ ವಾರ್ತೆ): ನೀರಿನ ಬಿಲ್ ಪಾವತಿಯ ಕುರಿತ ಮಾಹಿತಿಯನ್ನು ಹಾಗೂ ಕಾಲರಾ ತಡೆಗಟ್ಟುವ ನಿಟ್ಟಿನಲ್ಲಿ ಬೆಂಗಳೂರು ಜಲಮಂಡಳಿಯ ಹಲವು ಜನಸ್ನೇಹಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

ನಗರದಲ್ಲಿ ಕೋವಿಡ್ -19 ಹರಡುತ್ತಿರುವ ಹಿನ್ನೆಲೆಯಲ್ಲಿ ಅಂತರ ಕಾಯ್ದುಕೊಳ್ಳಬೇಕಾಗಿರುವ ಕಾರಣ ಜಲಮಂಡಳಿಯ ಮಾಪನ ಓದುಗರು ಮನೆಮನೆಗೆ ತೆರಳಿ ನೀರಿನ ಬಿಲ್‌ಅನ್ನು ವಿತರಿಸಲು ಸಾಧ್ಯವಾಗದಿರುವುದರಿಂದ ನೀರಿನ ಬಿಲ್‌ನ ಮಾಹಿತಿಯನ್ನು ಜಲಮಂಡಳಿಯಲ್ಲಿ ಲಭ್ಯವಿರುವ ಗ್ರಾಹಕರ ಮೊಬೈಲ್ ನಂಬರ್‌ಗಳಿಗೆ ವಾಚನ ದಿನವಹಿ ಎಸ್.ಎಂ.ಎಸ್.ಮುಖಾಂತರ ಕಳುಹಿಸಲಾಗುತ್ತಿದ್ದು, ಎಸ್.ಎಂ.ಎಸ್.ನಲ್ಲಿರುವ ಲಿಂಕ್ ಮುಖಾಂತರ ನೀರಿನ ಬಿಲ್‌ಅನ್ನು ಪಾವತಿಸಬಹುದಾಗಿರುತ್ತದೆ.

ಇದಲ್ಲದೆ ಜಲಮಂಡಳಿಯ ಅಧಿಕೃತ ವೆಬ್‌ಸೈಟ್ : www.bwssb.gov.in ನಲ್ಲಿ ಎಲ್ಲಾ ಗ್ರಾಹಕರ ಬಿಲ್‌ಗಳನ್ನು ವಾಚನ ದಿನವಹಿ ಪ್ರಕಟಿಸಲಾಗುತ್ತಿದ್ದು, ನೀರಿನ ಬಿಲ್ ಪಾವತಿಯನ್ನು ಮಂಡಳಿಯ ವೆಬ್‌ಸೈಟ್ ಹಾಗೂ ಆನ್‌ಲೈನ್ ಪೇಮೆಂಟ್ ಸೇವೆಗಳಾದ BBPS(Bharat Bill Payment

System)ನಿಂದ ಲಭ್ಯವಿರುವ Paytm, Phone-Pe, Google Pay, ಮುಖಾಂತರವಾಗಿಯೂ ಮಾಡಬಹುದಾಗಿರುತ್ತದೆ. ಗ್ರಾಹಕರು ಇದರ ಸದುಪಯೋಗಪಡಿಸಿಕೊಳ್ಳಲು ಕೋರಲಾಗಿದೆ.

ಬೆಂಗಳೂರು ಜಲಮಂಡಳಿಯು ನೀರು ಸರಬರಾಜು ಕೊಳವೆಯಲ್ಲಿ ಸೋರುವಿಕೆಯನ್ನು ಸಾರ್ವಜನಿಕರಿಂದ ಅಥವಾ ಮಂಡಳಿಯ ಸಿಬ್ಬಂದಿಯವರು ಗುರುತಿಸಿದ ತಕ್ಷಣ ಸೋರುವಿಕೆ ತಡೆಗಟ್ಟಲು ಕ್ರಮವಹಿಸಲಾಗುತ್ತದೆ. ಇದಲ್ಲದೆ ಕಲುಷಿತ ನೀರು ಸರಬರಾಜಾಗುತ್ತಿದ್ದಲ್ಲಿ ತಕ್ಷಣ ಕ್ರಮವಹಿಸಿ ಕಲುಷಿತ ನೀರು ಸರಬರಾಜು ಕೊಳವೆಗೆ ಸೇರದಂತೆ ಕೂಡಲೇ ಕಾರ್ಯ ಪ್ರವೃತ್ತರಾಗಿ ಕ್ರಮವಹಿಸಲಾಗುತ್ತದೆ.

ಕಾಲರಾ ಮತ್ತು ಜಿ.ಇ. ಗೆ ಸಂಬಂಧಿಸಿದ ಮಾಹಿತಿಯನ್ನು ಸಾಂಕ್ರಾಮಿಕ ರೋಗಗಳ ಆಸ್ಪತ್ರೆಯಿಂದ ದಿನಾಂಕ 04.04.2020 ರಿಂದ 15.04.2020 ರವೆಗೆ ನೋಂದಣಿಯಾದ ಪ್ರಕರಣಗಳ ವಿಳಾಸವನ್ನು ಪಡೆದು ಅಂತಹ ಸ್ಥಳಗಳಿಂದ ನೀರಿನ ಮಾದರಿಯನ್ನು ಸಂಗ್ರಹಿಸಲಾಗಿ, ಕ್ರೋಢೀಕರಿಸಿದ ಫಲಿತಾಂಶದ ಸಂಪೂರ್ಣ ಫಲಿತಾಂಶದ ಸಂಕ್ಷಿಪ್ತ ವಿವರ ಈ ಕೆಳಕಂಡಂತಿದೆ.

ದಿನಾಂಕ 04.04.2020 ರಿಂದ 15.04.2020 ರವರೆಪಗೆ ದಾಖಲುಗೊಂಡ ಒಟ್ಟು 31 ರ ನೀರಿನ ಮಾದರಿಯನ್ನು ಸಂಗ್ರಹಿಸಿದ್ದು, 02 ಮಾದರಿಗೆ ಸಂಬಂಧಿಸಿದ ಪ್ರದೇಶಗಳಲ್ಲಿ ನೀರು ಸರಬರಾಜು ಇಲ್ಲದಿದ್ದ ಕಾರಣ ನೀರಿನ ಮಾದರಿಯನ್ನು ಸಂಗ್ರಹಿಸಿರುವುದಿಲ್ಲ, 19 ಮಾದರಿಗೆ ಸಂಬಂಧಿಸಿದ ನೀರಿನ ಮಾದರಿಗಳನ್ನು ಸಂಗ್ರಹಿಸಲಾಗಿದ್ದು, 16 ಮಾದರಿಯ ಫಲಿತಾಂಶವು ಕುಡಿಯಲು ಯೋಗ್ಯವಾಗಿರುತ್ತದೆ. 03 ಮಾದರಿಯ ಫಲಿತಾಂಶವು ನಿರೀಕ್ಷಣೆಯಲ್ಲಿರುತ್ತದೆ. ಉಳಿದ 10 ಮಾದರಿಗಳಿಗೆ ಸಂಬಂಧಿಸಿದ ಪ್ರದೇಶಗಳು ಜಲ ಮಂಡಳಿಯ ವ್ಯಾಪ್ತಿಗೆ ಒಳಪಟ್ಟಿರುವುದಿಲ್ಲ.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ:22238888, ಸಹಾಯವಾಣಿ 1916 ಹಾಗೂ ವಾಟ್ಸ್ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ. ತಮ್ಮ ಸಮೀಪದ ಸೇವಾಠಾಣೆಯ ದೂರವಾಣಿ ಸಂಖ್ಯೆಯನ್ನು ಮಂಡಳಿಯ ಅಧಿಕೃತ ವೆಬ್‌ಸೈಟ್:www.bwssb.gov.in ನಲ್ಲಿ ಪಡೆಯಬಹುದಾಗಿರುತ್ತದೆ ಎಂದು ಪ್ರಕಟಣೆ ತಿಳಿಸಿದೆ.

# BWSSB payment of water bills

Bengaluru, April 15 (Karnataka Information): BWSSB immediately take action to stop the leakage as soon as water leakages are detected and reported from public or from staff of BWSSB. Adding to this, if contamination of water is detected it is taken care that contaminated water does not get in contact to the water supply pipe lines. BWSSB collected address of the cases reported about Cholera and GE from Health & Family Welfare Department, Government Epidemic Disease Hospital, Bangalore, 04.04.2020 to 15.04.2020 tested the samples and results of the samples are enclosed with this letter. The abstract of the result is as mentioned below.

Among the 31 cases reported from 04.04.2020 to 15.04.2020, samples from 02 areas were not collected since water supply for such areas was not on the day when the water sample were collected, samples from 19 areas were collected and result of 16 samples were obtained as

suitable for potable purpose(SPP). Result of 03 samples is awaited. The areas of remaining10 cases does not comes under BWSSB limits.

Since COVID-19 is spreading in the city rapidly, in the view of maintaining social distance, BWSSB's meter reader cannot issue the bill by taking meter reading from each house. Water bill details are being sent through SMS reading day wise for the mobile numbers of customers that are available in the Board and payment can be made by clicking on the link provided in the SMS. Along with this, water bills of all consumers are being published reading day wise in BWSSB official website: www.bwssb.gov.in and payment can be made through the website. Payment can also be made through online services of BBPS (Bharath Bill Payment System) like Paytm, Phone pe, Google pay etc.

It is also informed that BWSSB customer care number 080-22238888 is available 24/7 to receive the complaint of customers. Along with this, whatsapp number:8762228888 and toll free number 1916 is also available. Service station address and contact details can be obtained through BWSSB official **web site :www.bwssb.gov.in .**